**All India Radio: Bangalore**
**National Bulletin In Kannada**
**12.11.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.11.2025 1.10 p.m.**

**<><><><>**

ಮುಖ್ಯಾಂಶಗಳು

1. ಗ್ಯಾಬೊರೋನ್‌ನಲ್ಲಿಂದು ಬೋಟ್ಸ್ವಾನಾ ಅಧ್ಯಕ್ಷರೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ದ್ವಿಪಕ್ಷೀಯ ಮಾತುಕತೆ
2. ಭೂತಾನ್‌ನಲ್ಲಿ ಕಾಲಚಕ್ರ ಸಬಲೀಕರಣ ಸಮಾರಂಭ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
3. ಜಿ-೭ ವಿದೇಶಾಂಗ ಸಚಿವರೊಂದಿಗೆ ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ
4. ದೆಹಲಿ ಕಾರು ಸ್ಫೋಟ ಪ್ರಕರಣ; ಮೃತಕುಟುಂಬಗಳಿಗೆ ತಲಾ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ ದೆಹಲಿ ಸರ್ಕಾರ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಗ್ಯಾಬೊರೋನ್‌ನಲ್ಲಿ ಬೋಟ್ಸ್ವಾನಾ ಅಧ್ಯಕ್ಷ ಡುಮಾ ಬೊಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ ಮತ್ತು ಹೂಡಿಕೆಗಳು, ತಂತ್ರಜ್ಞಾನ, ಇಂಧನ, ಕೃಷಿ, ಆರೋಗ್ಯ, ಔಷಧ, ರಕ್ಷಣೆ ಮತ್ತು ಜನರಿಂದ ಜನರಿಗೆ ಸಂಬಂಧಗಳಂತಹ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸುವ ಹೊಸ ಮಾರ್ಗಗಳ ಕುರಿತು ಅವರು ಚರ್ಚಿಸಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂಸದರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ ಮತ್ತು ಬೋಟ್ಸ್ವಾನಾದ ಐತಿಹಾಸಿಕ ಮಹತ್ವದ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ಬೋಟ್ಸ್ವಾನಾದ ಹಲವಾರು ಗಣ್ಯರು ಸಹ ಅವರನ್ನು ಭೇಟಿ ಮಾಡಲಿದ್ದಾರೆ.

<><><><>

ಭೂತಾನ್ ಪ್ರವಾಸದ ಎರಡನೇ ದಿನವಾದ ಇಂದು ಪ್ರಧಾನಿ ನರೇಂದ್ರ ಮೋದಿ ಅವರು, ಥಿಂಪುವಿನ ಚಾಂಗ್ಲಿಮಿಥಾಂಗ್ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿರುವ ಕಾಲಚಕ್ರ ಸಬಲೀಕರಣ

ಸಮಾರಂಭದಲ್ಲಿ ಭಾಗಿಯಾಗಿದ್ದಾರೆ. ಭೂತಾನ್ ರಾಜ ಜಿಗ್ಮೆ ಖೇಸರ್ ನಮ್ಗ್ಯೆಲ್ ವಾಂಗ್ಚುಕ್, ನಾಲ್ಕನೇ ಡ್ರಕ್ ಗಯಾಲ್ಪೊ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಜಂಟಿಯಾಗಿ ಸಮಾರಂಭವನ್ನು ಉದ್ಘಾಟಿಸಿದರು.ಮೂರು ದಿನಗಳ ಈ ಉತ್ಸವವು ಟಿಬೆಟಿಯನ್ ಬೌದ್ಧಧರ್ಮದಲ್ಲಿ ದೊಡ್ಡ ಆಚರಣೆಯಾಗಿದ್ದು, ಇದು ಜ್ಞಾನೋದಯವನ್ನು ಸಾಧಿಸಲು ನಿರ್ದಿಷ್ಟ ಧ್ಯಾನ ಪದ್ಧತಿಗಳನ್ನು ಕೈಗೊಳ್ಳಲು ಶಕ್ತಿಯನ್ನು ನೀಡುತ್ತದೆ. ಕಾಲಚಕ್ರ ದೀಕ್ಷೆಯು ಸಮಯ, ಬ್ರಹ್ಮಾಂಡ ಮತ್ತು ಮಾನವ ಅನುಭವದ ಒಕ್ಕೂಟವನ್ನು ಸಂಕೇತಿಸುತ್ತದೆ ಎಂದು ನಂಬಲಾಗಿದೆ. ಕಾಲಚಕ್ರ ಸಬಲೀಕರಣ ಸಮಾರಂಭಕ್ಕೆ ಜೆ ಖೆನ್ಪೋ ಅಧ್ಯಕ್ಷತೆ ವಹಿಸಿದ್ದಾರೆ. ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದ ಜೊತೆಗೆ, ಕಲೆ ಮತ್ತು ಕಲಾಕೃತಿಗಳ ಪ್ರದರ್ಶನ ಹಾಗೂ ಕಾಲಚಕ್ರದ ಕುರಿತು ವಿದ್ವತ್ಪೂರ್ಣ ವಿಚಾರ ಸಂಕಿರಣಗಳು ನಡೆಯಲಿವೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಥಿಂಪುವಿನಲ್ಲಿ ಭೂತಾನ್ ರಾಜ ಜಿಗ್ಮೆ ಖೇಸರ್ ನಾಮ್‌ಗ್ಯೆಲ್ ವಾಂಗ್‌ಚುಕ್ ಅವರೊಂದಿಗೆ ಮಾತುಕತೆ ನಡೆಸಿದರು. ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಹೆಚ್ಚಿಸಲು ಮತ್ತು ಬಲಪಡಿಸಲು ಇಬ್ಬರು ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅವರು ಚರ್ಚೆಗಳನ್ನು ಸಹ ನಡೆಸಿದರು. ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸಲು ನವೀಕರಿಸಬಹುದಾದ ಇಂಧನ, ಮಾನಸಿಕ ಆರೋಗ್ಯ ಸೇವೆಗಳು ಮತ್ತು ಆರೋಗ್ಯ ರಕ್ಷಣೆ ಕ್ಷೇತ್ರಗಳಲ್ಲಿ ಮೂರು ಒಪ್ಪಂದಗಳ ವಿನಿಮಯಕ್ಕೆ ಉಭಯ ನಾಯಕರು ಸಾಕ್ಷಿಯಾದರು. ಭೂತಾನ್‌ನಲ್ಲಿ ಇಂಧನ ಯೋಜನೆಗಳಿಗೆ ಹಣಕಾಸು ಒದಗಿಸಲು ಭಾರತ ಸರ್ಕಾರವು ಭೂತಾನ್‌ಗೆ ನಾಲ್ಕು ಸಾವಿರ ಕೋಟಿ ರೂಪಾಯಿಗಳ ರಿಯಾಯಿತಿ ಸಾಲವನ್ನು ಘೋಷಿಸಿದೆ.

<><><><>

ಕೆನಡಾದ ಒಂಟಾರಿಯೊದಲ್ಲಿ ಇಂದು ನಡೆದ ಜಿ-೭ ವಿದೇಶಾಂಗ ಸಚಿವರ ಸಭೆಯ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಜಿ-೭ ರಾಷ್ಟ್ರಗಳ ವಿದೇಶಾಂಗ ಸಚಿವರನ್ನು ಭೇಟಿಯಾದರು. ಈ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಅವರು ಕೆನಡಾದ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರನ್ನು ಅಭಿನಂದಿಸಿದರು ಮತ್ತು ೨೦೨೫ ರ ಹೊಸ ಮಾರ್ಗಸೂಚಿಯ ಅನುಷ್ಠಾನದಲ್ಲಿನ ಪ್ರಗತಿಯನ್ನು ಶ್ಲಾಘಿಸಿದರು. ಈ ದ್ವಿಪಕ್ಷೀಯ

ಪಾಲುದಾರಿಕೆಯನ್ನು ಮತ್ತಷ್ಟು ಪುನರ್ನಿರ್ಮಿಸಲು ಭಾರತ ಎದುರು ನೋಡುತ್ತಿದೆ ಎಂದು ಅವರು ಹೇಳಿದರು. ಡಾ. ಜೈಶಂಕರ್ ಅವರು ಮೆಕ್ಸಿಕೋದ ವಿದೇಶಾಂಗ ಸಚಿವ ಡಾ. ಜುವಾನ್ ರಾಮನ್ ಡೆ ಲಾ ಫ್ಯೂಯೆಂಟೆ ಅವರನ್ನು ಭೇಟಿಯಾದರು. ಈ ವೇಳೆ, ವ್ಯಾಪಾರ, ಆರೋಗ್ಯ, ಔಷಧ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಉಭಯ ದೇಶಗಳ ನಡುವಿನ ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ಬಗ್ಗೆ ಚರ್ಚಿಸಿದರು. ಫ್ರಾನ್ಸ್ ವಿದೇಶಾಂಗ ಸಚಿವ ಜೀನ್-ನೋಯೆಲ್ ಬ್ಯಾರಟ್ ಅವರೊಂದಿಗಿನ ಭೇಟಿಯ ಸಮಯದಲ್ಲಿ, ಇಬ್ಬರೂ ನಾಯಕರು ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯ ಬಗ್ಗೆ ಪರಾಮರ್ಶಿಸಿದರು ಹಾಗೂ ಸಹಕಾರವನ್ನು ಬಲಗೊಳಿಸುವ ಬಗ್ಗೆ ಚರ್ಚಿಸಿದರು. ಬ್ರಿಟನ್ ವಿದೇಶಾಂಗ ಕಾರ್ಯದರ್ಶಿ ಯೆವೆಟ್ ಕೂಪರ್ ಅವರನ್ನು ಭೇಟಿಯಾದ ಡಾ. ಜೈಶಂಕರ್, ಪ್ರಮುಖ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವಿನ ಸಹಕಾರವನ್ನು ಮತ್ತಷ್ಟು ಆಳಗೊಳಿಸಲು ಭಾರತ-ಬ್ರಿಟನ್ ವಿಷನ್ ೨೦೩೫ ಅನ್ನು ಪುನರುಚ್ಚರಿಸಿದರು. ಇದೇ ವೇಳೆ, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಬ್ರೆಜಿಲ್‌ನ ವಿದೇಶಾಂಗ ಸಚಿವ ಮೌರೊ ವಿಯೆರಾ, ಜರ್ಮನ್ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಮತ್ತು ದಕ್ಷಿಣ ಆಫ್ರಿಕಾದ ವಿದೇಶಾಂಗ ಸಚಿವ ರೊನಾಲ್ಡ್ ಲಮೋಲಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

<><><><>

ದೆಹಲಿ ಸ್ಫೋಟ ಘಟನೆಯಲ್ಲಿ ಮೃತಪಟ್ಟ ಮತ್ತು ಗಾಯಗೊಂಡವರ ಕುಟುಂಬಗಳಿಗೆ ದೆಹಲಿ ಸರ್ಕಾರ ಪರಿಹಾರ ಘೋಷಿಸಿದೆ. ಈ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ತಲಾ ೧೦ ಲಕ್ಷ ರೂಪಾಯಿಗಳ ಪರಿಹಾರ ನೀಡಲಾಗುವುದು ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ತಿಳಿಸಿದ್ದಾರೆ. ಶಾಶ್ವತ ಅಂಗವಿಕಲರಿಗೆ ತಲಾ ೫ ಲಕ್ಷ ರೂಪಾಯಿ ಮತ್ತು ಗಂಭೀರವಾಗಿ ಗಾಯಗೊಂಡವರಿಗೆ ತಲಾ ೨ ಲಕ್ಷ ರೂಪಾಯಿ ನೀಡಲಾಗುವುದು. ಗಾಯಾಳುಗಳಿಗೆ ಸರಿಯಾದ ಮತ್ತು ಗುಣಮಟ್ಟದ ಚಿಕಿತ್ಸೆ ನೀಡುವ ಜವಾಬ್ದಾರಿಯನ್ನು ದೆಹಲಿ ಸರ್ಕಾರ ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದ್ದಾರೆ.

<><><><>

ದೆಹಲಿ-ಎನ್‌ಸಿಆರ್ ಮತ್ತು ಪುಲ್ವಾಮಾದ ಹಲವು ಸ್ಥಳಗಳಲ್ಲಿ ನಡೆಸಿದ ದಾಳಿಗಳಲ್ಲಿ ತನಿಖಾ ಸಂಸ್ಥೆಗಳು ದೊಡ್ಡ ಪ್ರಮಾಣದ ಸ್ಫೋಟಕಗಳನ್ನು ವಶಪಡಿಸಿಕೊಂಡಿವೆ. ಈ ತಿಂಗಳ ೯ ಮತ್ತು

೧೦ ರಂದು ಹರಿಯಾಣದ ಫರಿದಾಬಾದ್‌ನಲ್ಲಿ ನಡೆಸಿದ ದಾಳಿಗಳಲ್ಲಿ, ಸುಮಾರು ಮೂರು ಸಾವಿರ ಕಿಲೋಗ್ರಾಂಗಳಷ್ಟು ಸ್ಫೋಟಕಗಳು, ಡಿಟೋನೇಟರ್‌ಗಳು, ಟೈಮರ್‌ಗಳು ಮತ್ತು ಬಾಂಬ್ ತಯಾರಿಸುವ ಇತರೆ ವಸ್ತುಗಳನ್ನು ತನಿಖಾ ಸಂಸ್ಥೆಗಳು ವಶಪಡಿಸಿಕೊಂಡಿವೆ ಎಂದು ಮೂಲಗಳು ತಿಳಿಸಿವೆ.

<><><>

ಇಂದು ಸಾರ್ವಜನಿಕ ಸೇವಾ ಪ್ರಸಾರ ದಿನ. ಈ ದಿನವನ್ನು ಪ್ರತಿ ವರ್ಷ ನವೆಂಬರ್ ೧೨ ರಂದು ಆಚರಿಸಲಾಗುತ್ತದೆ. ಇದನ್ನು ರಾಷ್ಟ್ರಪಿತ ಮತ್ತು ಸ್ವಾತಂತ್ರ್ಯ ಹೋರಾಟಗಾರ ಮಹಾತ್ಮ ಗಾಂಧಿಯವರು ರೇಡಿಯೋ ಮೂಲಕ ಮಾಡಿದ ಐತಿಹಾಸಿಕ ಭಾಷಣವನ್ನು ಸ್ಮರಿಸಲಾಗುತ್ತದೆ. ರಾಷ್ಟ್ರಪಿತ ಮಹಾತ್ಮ ಗಾಂಧಿಯವರು ೧೯೪೭ ರಲ್ಲಿ ಈ ದಿನದಂದು ನವದೆಹಲಿಯ ಪ್ರಸಾರ ಭವನಕ್ಕೆ ತಮ್ಮ ಮೊದಲ ಮತ್ತು ಏಕೈಕ ಭೇಟಿ ನೀಡಿದರು. ಮಹಾತ್ಮ ಗಾಂಧಿಯವರು ಕುರುಕ್ಷೇತ್ರದಲ್ಲಿ ಉಳಿದುಕೊಂಡಿರುವ ಮತ್ತು ಪಾಕಿಸ್ತಾನದಿಂದ ಸ್ಥಳಾಂತರಗೊಂಡ ಭಾರತೀಯರನ್ನು ಉದ್ದೇಶಿಸಿ ದೀಪಾವಳಿಯ ವಿಶೇಷ ಸಂದರ್ಭದಲ್ಲಿ ರೇಡಿಯೋ ಮೂಲಕ ಮಾತನಾಡಿದರು. ಸ್ವಾತಂತ್ರ್ಯ ಹೋರಾಟಗಾರ್ತಿ ರಾಜಕುಮಾರಿ ಅಮೃತ್ ಕೌರ್ ಕೂಡ ಈ ಸಮಯದಲ್ಲಿ ಅವರೊಂದಿಗೆ ಇದ್ದರು. ೨೦೦೦ ನೇ ಇಸವಿಯಲ್ಲಿ, ಆಗಿನ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವೆ ಸುಷ್ಮಾ ಸ್ವರಾಜ್ ಅವರು, ಪ್ರತಿ ನವೆಂಬರ್ ೧೨ ನೇ ತಾರೀಖನ್ನು ಇನ್ನು ಮುಂದೆ ಸಾರ್ವಜನಿಕ ಸೇವಾ ಪ್ರಸಾರ ದಿನವಾಗಿ ಆಚರಿಸಲಾಗುವುದು ಎಂದು ಘೋಷಿಸಿದರು. ಅಂದಿನಿಂದ, ಆಕಾಶವಾಣಿಯು ಪ್ರತಿ ವರ್ಷ ವಿಶೇಷ ಕಾರ್ಯಕ್ರಮಗಳೊಂದಿಗೆ ಈ ಸಂದರ್ಭವನ್ನು ಆಚರಿಸುತ್ತಿದೆ. ?

<><><>

ಪ್ರತಿ ಮಗುವನ್ನು ನಿಮೋನಿಯಾದಿಂದ ರಕ್ಷಿಸುವ ಕೇಂದ್ರ ಸರ್ಕಾರದ ಬದ್ಧತೆಯನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಪುನರುಚ್ಚರಿಸಿದ್ದಾರೆ. ವಿಶ್ವ ನಿಮೋನಿಯಾ ದಿನವಾದ ಇಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ಬಲವಾದ ಆರೋಗ್ಯ ವ್ಯವಸ್ಥೆ ಮತ್ತು ಸಮುದಾಯ ಜಾಗೃತಿ ಮೂಲಕ ಬಾಲ್ಯದಲ್ಲೇ ನಿಮೋನಿಯಾವನ್ನು ನಿವಾರಣೆ ಮಾಡಲು ಕೇಂದ್ರ ಸರ್ಕಾರ ಸಾಮಾಜಿಕ ಜಾಗೃತಿ ಮೂಡಿಸುತ್ತಿದೆ. ಅಲ್ಲದೆ,

ನಿಮೋನಿಯಾವನ್ನು ಯಶಸ್ವಿಯಾಗಿ ನಿರ್ಮೂಲನೆಗೊಳಿಸಲು ಎಸ್.ಎ.ಎ.ಎನ್.ಎಸ್ ಉಪಕ್ರಮವನ್ನು ಪ್ರಾರಂಭಿಸಿದೆ ಎಂದು ತಿಳಿಸಿದ್ದಾರೆ.

<><><><>

ಗೋವಾದಲ್ಲಿ ನಡೆಯಲಿರುವ ಮುಂಬರುವ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಮಾಧ್ಯಮ ಸೌಲಭ್ಯವನ್ನು ಹೆಚ್ಚಿಸಲು ಭಾರತ ಸರ್ಕಾರದ ವಾರ್ತಾ ಶಾಖೆ, ಹಲವಾರು ಹೊಸ ಉಪಕ್ರಮಗಳನ್ನು ಘೋಷಿಸಿದೆ. ಮಾಧ್ಯಮ ಸಂವಾದದ ಸಂದರ್ಭದಲ್ಲಿ ಮಾತನಾಡಿದ ಪಿಐಬಿ ಪ್ರಧಾನ ಮಹಾನಿರ್ದೇಶಕ ಧೀರೇಂದ್ರ ಓಜಾ, ಕಳೆದ ವರ್ಷದ ಉತ್ಸವಕ್ಕೆ ೭೦೦ ಕ್ಕೂ ಹೆಚ್ಚು ಪತ್ರಕರ್ತರಿಗೆ ಮಾನ್ಯತೆ ನೀಡಲಾಗಿದೆ. ಚಲನಚಿತ್ರ ನಿರ್ಮಾಪಕರು, ತೀರ್ಪುಗಾರರು ಮತ್ತು ತಾರೆಯರನ್ನು ಒಳಗೊಂಡ ೫೦ ಕ್ಕೂ ಹೆಚ್ಚು ಪತ್ರಿಕಾಗೋಷ್ಠಿಗಳು ನಡೆದಿವೆ ಎಂದು ಹೇಳಿದರು. ಈ ವರ್ಷ ಪಿಐಬಿ, ಕೊಂಕಣಿ ಸೇರಿದಂತೆ ೧೮ ಭಾಷೆಗಳಲ್ಲಿ ಬಹುಭಾಷಾ ಪತ್ರಿಕಾ ಪ್ರಕಟಣೆಗಳನ್ನು ಮುಂದುವರಿಸುತ್ತದೆ ಹಾಗೂ ಎಚ್‌ಡಿ ಫೋಟೋ ಶೀರ್ಷಿಕೆಗಳು ಮತ್ತು ಪತ್ರಿಕಾಗೋಷ್ಠಿಗಳ ನೇರ ಪ್ರಸಾರವನ್ನು ಒದಗಿಸುತ್ತದೆ ಎಂದರು. ಮಾನ್ಯತೆ ಪಡೆದ ಪತ್ರಕರ್ತರಿಗೆ ಚಲನಚಿತ್ರ ಮೆಚ್ಚುಗೆಯ ಕೋರ್ಸ್ ಇದೇ ೧೮ ರಂದು ಪ್ರಾರಂಭವಾಗುತ್ತದೆ. ಪಿಐಬಿ ಮೈಕ್ರೋಸೈಟ್-ಪತ್ರಿಕಾ ಪ್ರಕಟಣೆಗಳು, ಛಾಯಾಚಿತ್ರಗಳು ಮತ್ತು ಲೈವ್ ಈವೆಂಟ್ ಲಿಂಕ್‌ಗಳಿಗೆ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಧೀರೇಂದ್ರ ಓಜಾ ಮಾಹಿತಿ ನೀಡಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>